ಕರ್ನಾಟಕ ಪರೀಕ್ಷಾ ಪ್ರಾಧಿಕಾರ KEA
@KEA_karnataka

Show translation

#KeaRecruitment #agricultureofficer:
ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿಗಳ ನೇಮಕಾತಿ ಸಂಬಂಧ ಹೊರಡಿಸಿರುವ ಅಧಿಸೂಚನೆಯನ್ನು ಹಿಂಪಡೆಯಲು ಕೃಷಿ ಇಲಾಖೆ ಕೋರಿರುವ ಕಾರಣ ಅರ್ಜಿ ಸಲ್ಲಿಕೆ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿದೆ.

ಪರಿಶಿಷ್ಟ ಜಾತಿಗೆ ಶೇ 15 ರಷ್ಟು ಮೀಸಲಾತಿ ನಿಗದಿಪಡಿಸಿ ಸರ್ಕಾರ ಆದೇಶ ಹೊರಡಿಸಿದೆ. ಪರಿಷ್ಕೃತ ಒಳಮೀಸಲಾತಿ ಪ್ರಮಾಣವನ್ನು ಅಳವಡಿಸಿಕೊಂಡು ಹೊಸ ಅಧಿಸೂಚನೆ ಹೊರಡಿಸಬೇಕಿರುವ ಕಾರಣ ಚಾಲ್ತಿಯಲ್ಲಿರುವ ನೇಮಕಾತಿ ಪ್ರಕ್ರಿಯೆ ಸ್ಥಗಿತಗೊಳಿಸಲು ಕೃಷಿ ಆಯುಕ್ತರು ಕೋರಿದ್ದಾರೆ. ಮುಂದಿನ ಪ್ರಕ್ರಿಯೆಯನ್ನು ನಂತರ ತಿಳಿಸಲಾಗುವುದು.

- ಹೆಚ್.ಪ್ರಸನ್ನ ಐಎಎಸ್
ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)
ಕೃಷಿ ಆಯುಕ್ತರ ಕಾರ್ಯಾಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560001

ಸಂ:ಸಿ-1/ನೇನೇ/E-2125413/2025-26 ದಿನಾಂಕ: 29.04.2026

ಇವರಿಗೆ,

ನಿರ್ದೇಶಕರು,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ,
ಮಲ್ಲೇಶ್ವರಂ,
ಬೆಂಗಳೂರು.

ಮಾನ್ಯರೇ,

ವಿಷಯ:- ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಹೊರಡಿಸಿರುವ ಅಧಿಸೂಚನೆಯನ್ನು ಪರಿಷ್ಕರಣೆ ಮಾಡುವ ಕುರಿತು.

ಉಲ್ಲೇಖ:- 1. ಇದೇ ಸಮ ಸಂಖ್ಯೆಯ ಪತ್ರ ದಿನಾಂಕ 25.03.2026.

2. ನಿಮ್ಮ ಕಛೇರಿ ಪತ್ರ ಸಂಖ್ಯೆ: ED/KEA/08/ನೇಪಿ/2026 (RPC) ಮತ್ತು ED/KEA/09/3/2026 (KK) ದಿನಾಂಕ:-31.03.2026.

3. ಸರ್ಕಾರದ ಸಚಿವಾಲಯದ ಪತ್ರ ಸಂಖ್ಯೆ:- AGRI/433/AGS/2025 ದಿನಾಂಕ:- 18.04.2026.

4. ಸರ್ಕಾರದ ಆದೇಶ ಸಂಖ್ಯೆ:- ಸಿಆಸುಇ/02/ಸೇಹಿಮ/2026, ಬೆಂಗಳೂರು, ದಿನಾಂಕ:- 27.04.2026.

****

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಉಲ್ಲೇಖ 1 ರಂತೆ ನಾವು ಸಲ್ಲಿಸಿದ ಪ್ರಸ್ತಾವನೆಯನ್ವಯ ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಕೃಷಿ ಅಧಿಕಾರಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖ (2) ಹಾಗೂ (3) ರಂತೆ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ ಅಧಿಸೂಚನೆ ಹೊರಡಿಸಿರುತ್ತೀರಿ.

ಆದರೇ ಉಲ್ಲೇಖ (4) ರನ್ವಯ ಸರ್ಕಾರದ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿಗೆ ನಿಗದಿಪಡಿಸಿರುವ ಶೇಕಡ 15 ರಷ್ಟು ಮೀಸಲಾತಿಯಲ್ಲಿ ಪ್ರವರ್ಗ-ಎ, ಪ್ರವರ್ಗ-ಬಿ ಪ್ರವರ್ಗ-ಸಿ ಒಳಮೀಸಲಾತಿಯನ್ನು ಕ್ರಮವಾಗಿ **5.25, 5.25, 4.50** ಪ್ರಮಾಣದಲ್ಲಿ ಅನುಷ್ಠಾನಗೊಳಿಸಲು ನಿರ್ದೇಶಿಸಿ, ಒಳಮೀಸಲಾತಿ ಅಳವಡಿಸದೇ ಹೊರಡಿಸಿರುವ ಎಲ್ಲಾ ನೇಮಕಾತಿ ಅಧಿಸೂಚನೆ ಹಿಂಪಡೆದು ಒಳಮೀಸಲಾತಿ ಅಳವಡಿಸಿಕೊಂಡು ಪರಿಷ್ಕೃತ ಅಧಿಸೂಚನೆಗಳನ್ನು ಹೊರಡಿಸಲು ಸರ್ಕಾರವು ಉಲ್ಲೇಖ-4 ರಂತೆ ನಿರ್ದೇಶಿಸಿರುತ್ತದೆ.

ಈ ಹಿನ್ನಲೆಯಲ್ಲಿ ಉಲ್ಲೇಖ-2 ಹಾಗೂ 3 ರನ್ವಯ ತಾವು ಹೊರಡಿಸಿರುವ ಅಧಿಸೂಚನೆಗಳನ್ನು ಕೂಡಲೇ ಹಿಂಪಡೆಯಲು ಕೋರಿದೆ. ಒಳಮೀಸಲಾತಿ ಅಳವಡಿಸಿಕೊಂಡು ಪರಿಷ್ಕೃತ ಅಧಿಸೂಚನೆಗಳನ್ನು ಹೊರಡಿಸಲು ಈ ಕಛೇರಿಯಿಂದ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದೆಂದು ಈ ಮೂಲಕ ತಿಳಿಸಿದೆ.

ತಮ್ಮ ವಿಶ್ವಾಸಿ

ಕೃಷಿ ಆಯುಕ್ತರು